**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ | : | (157+53) |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಹಾಗೂ ಶ್ರೀ ಎಸ್.ವಿ. ಸಂಕನೂರ(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 08.12.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಅನುದಾನಿತ ಪ್ರಾಥಮಿಕ, ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳು ಎಷ್ಟು; ಈ ಶಾಲಾ ಕಾಲೇಜುಗಳಲ್ಲಿ ಮಂಜೂರಾಗಿರುವ ಒಟ್ಟು ಬೋಧಕ ಹಾಗೂ ಬೋಧಕೇತರ ಹುದ್ದೆಗಳು ಎಷ್ಟು; (ಜಿಲ್ಲಾವಾರು ಸಂಸ್ಥೆಗಳ ಸಮೇತ ಮಾಹಿತಿಯನ್ನು ನೀಡುವುದು) | ರಾಜ್ಯದಲ್ಲಿರುವ ಒಟ್ಟು ಅನುದಾನಿತ ಪ್ರಾಥಮಿಕ ಶಾಲೆಗಳ ಸಂಖ್ಯೆ:**2526.**<br><br>ರಾಜ್ಯದಲ್ಲಿರುವ ಒಟ್ಟು ಅನುದಾನಿತ ಪ್ರೌಢ ಶಾಲೆಗಳ ಸಂಖ್ಯೆ: **3418.**<br><br>ರಾಜ್ಯದಲ್ಲಿರುವ ಒಟ್ಟು ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ: **813.**<br><br>ಈ ಶಾಲಾ ಕಾಲೇಜುಗಳಲ್ಲಿ ಮಂಜೂರಾದ ಒಟ್ಟು ಬೋಧಕ ಹಾಗೂ ಬೋಧಕೇತರ ಹುದ್ದೆಗಳ ವಿವರ ಕೆಳಕಂಡಂತಿದೆ.<br><br>**ಶಾಲೆ / ಕಾಲೇಜು** — **ಬೋಧಕ** — **ಬೋಧಕೇತರ**<br>ಪ್ರಾಥಮಿಕ — 18086 — -<br>ಪ್ರೌಢ — 26574 — 3272<br>ಪದವಿ ಪೂರ್ವ — 7275 — 2541<br>**ಒಟ್ಟು** — **51935** — **5813**<br><br>ಅನುದಾನಿತ ಪ್ರಾಥಮಿಕ ಶಾಲೆಗಳಿಗೆ ಮಂಜೂರಾದ ಹುದ್ದೆಗಳ ವಿವರಗಳನ್ನು **ಅನುಬಂಧ-1ರಲ್ಲಿ**, ಅನುದಾನಿತ ಪ್ರೌಢ ಶಾಲೆಗಳಿಗೆ ಮಂಜೂರಾದ ಹುದ್ದೆಗಳ ವಿವರಗಳನ್ನು **ಅನುಬಂಧ-2ರಲ್ಲಿ** ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಿಗೆ ಮಂಜೂರಾದ ಹುದ್ದೆಗಳ ವಿವರಗಳನ್ನು **ಅನುಬಂಧ-3**ರಲ್ಲಿ ಒದಗಿಸಿದೆ |
| ಆ) | ಈ ಅನುದಾನಿತ ಶಾಲಾ ಕಾಲೇಜುಗಳಲ್ಲಿ ನಿಧನ, ನಿವೃತ್ತಿ, ರಾಜೀನಾಮೆ ಹಾಗೂ ಇತರೆ | ಅನುದಾನಿತ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ನಿಧನ, ನಿವೃತ್ತಿ, ಮರಣ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಗಿನಂತಿದೆ(ಅನುದಾನಿತ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ತಂತ್ರಾಂಶದಲ್ಲಿರುವ ದತ್ತಾಂಶದಂತೆ(ವಿಶೇಷ ಶಿಕ್ಷಕರ ಹುದ್ದೆ |

| | ಕಾರಣಗಳಿಂದ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | ಹೊರತುಪಡಿಸಿ) |
|---|---|---|

| ಶಾಲೆ / ಕಾಲೇಜು | ಬೋಧಕ | ಬೋಧಕೇತರ |
|---|---|---|
| ಪ್ರಾಥಮಿಕ | 7825 | - |
| ಪ್ರೌಢ | 4519 | - |
| ಪದವಿ ಪೂರ್ವ | 3580 | 1520 |
| **ಒಟ್ಟು** | **15,924** | **1520** |

**ಇ)** ಈ ಸಂಸ್ಥೆಗಳಲ್ಲಿ 2020ರವರೆಗೆ ನಿವೃತ್ತಿ, ಮರಣ ಹಾಗೂ ಇತರೆ ಕಾರಣಗಳಿಂದ ಖಾಲಿಯಾಗಿರುವ ಹುದ್ದೆಗಳನ್ನು ತುಂಬಿಕೊಳ್ಳುವ ಬಗ್ಗೆ ಸರ್ಕಾರಕ್ಕೆ ಹಲವು ಬಾರಿ ಮನವಿ ಮಾಡಿದ್ದರೂ ಕೂಡ ಇಲ್ಲಿಯವರೆಗೆ ಯಾವುದೇ ಕ್ರಮಗಳನ್ನು ಕೈಗೊಳ್ಳದೇ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣವೇನು;

**ಈ)** ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡಿ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)

**ಉತ್ತರ:**

**<u>ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ :</u>**

ಸುತ್ತೋಲೆ ಸಂಖ್ಯೆ: ಇಡಿ 267 ಪಿಎಂಸಿ 2007, ದಿನಾಂಕ: 12.10.2007ರಲ್ಲಿ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ "ರಾಜ್ಯದಲ್ಲಿರುವ ವಿಶೇಷವಾಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದರಿಂದ, ಅವುಗಳಲ್ಲಿನ ಅನುದಾನಿತ ಹುದ್ದೆಗಳು ಖಾಲಿಯಾದಲ್ಲಿ ಅಥವಾ ಒಂದು ಖಾಸಗಿ ಪ್ರಾಥಮಿಕ ಶಾಲೆಯನ್ನು ಸಹಾಯನುದಾನಕ್ಕೆ ಒಳಪಡಿಸಿದ ಪ್ರಥಮ ಸಂದರ್ಭದಲ್ಲಿ ಕೆಲವು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸದೇ ಉಳಿದಿದ್ದಲ್ಲಿ, ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರಿಂದ ಮಾತ್ರ ತುಂಬಿಕೊಳ್ಳಬೇಕು ಹೊರತು, ನೇರ ನೇಮಕಾತಿ ಮಾಡಿಕೊಳ್ಳತಕ್ಕದಲ್ಲ" ಎಂದು ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳನ್ನು ತುಂಬಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.

**<u>ಅನುದಾನಿತ ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ:</u>**

ಸರ್ಕಾರಿ ಆದೇಶ ಸಂಖ್ಯೆ:ಇಪಿ 396 ಎಸ್ಇಎಸ್ 2021 ದಿನಾಂಕ:07-08-2024ರಲ್ಲಿ 01-01-2016 ರಿಂದ 31-12-2020 ರವರೆಗೆ ರಾಜ್ಯದ ಅನುದಾನಿತ ಪ್ರೌಢಶಾಲೆ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾದ ಬೋಧಕ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡಲಾಗಿರುತ್ತದೆ.

ಸರ್ಕಾರದ ಪತ್ರ ಸಂಖ್ಯೆ ಸಿಆಸುಇ 388 ಸೇನೇನಿ 2024 ದಿನಾಂಕ: 25-11-2024 ರನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇಮಕಾತಿಗಳಲ್ಲಿ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಅಧಿಸೂಚನೆಗಳನ್ನು ಹೊರಡಿಸುವಂತಿಲ್ಲ ಎಂದು ಸೂಚಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಖಾಲಿ ಹುದ್ದೆಗಳನ್ನು ತುಂಬಿಕೊಳ್ಳುವ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿತ್ತು.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2025 ದಿನಾಂಕ:03-09-2025 ರಲ್ಲಿ ಪರಿಷ್ಕೃತ ಒಳ ಮೀಸಲಾತಿ ನಿಯಮಗಳನ್ವಯ ನಿಗದಿಪಡಿಸಲಾದ ಮೀಸಲಾತಿ ಬಿಂದುಗಳನ್ನು ಅನ್ವಯಿಸಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

ಸರ್ಕಾರಿ ಆದೇಶ ಸಂಖ್ಯೆ:ಇಪಿ 396 ಎಸ್‌ಇಎಸ್ 2021, ದಿನಾಂಕ:07-08-2024ರಲ್ಲಿ ಖಾಲಿ ಹುದ್ದೆ ಭರ್ತಿಯ ಪ್ರಕ್ರಿಯೆಯನ್ನು ತಂತ್ರಾಂಶದ ಮೂಲಕ ಮಾಡಲು ಸೂಚಿಸಲಾಗಿರುತ್ತದೆ. ಅದರಂತೆ ಈಗಾಗಲೇ ತಂತ್ರಾಂಶವನ್ನು ಅಭಿವೃದ್ಧಿಪಡಿಸಿ ಮೊದಲನೇ ಹಂತದಲ್ಲಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಶಾಲೆಯಲ್ಲಿ ಖಾಲಿ ಇರುವ ಹುದ್ದೆಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಭರ್ತಿ ಮಾಡಿಸಲಾಗಿರುತ್ತದೆ. ಎರಡನೇ ಹಂತದಲ್ಲಿ ಆಡಳಿತ ಮಂಡಳಿಗಳಿಂದ ಖಾಲಿ ಹುದ್ದೆಗಳನ್ನು ರೋಸ್ಟರ್‌ನಂತೆ ಭರ್ತಿ ಮಾಡಿಕೊಳ್ಳಲು ಆಡಳಿತ ಮಂಡಳಿ ಠರಾವಿನೊಂದಿಗೆ ಸಲ್ಲಿಸಲು ಪ್ರಸ್ತುತ ತಂತ್ರಾಂಶವನ್ನು ಲೈವ್ ಮಾಡಲಾಗಿದೆ. ಆಡಳಿತ ಮಂಡಳಿಗಳಿಂದ ಪ್ರಸ್ತಾವನೆ ಬಂದ ನಂತರ ತ್ವರಿತವಾಗಿ ನಿಯಮಾನುಸಾರ ಹುದ್ದೆ ಭರ್ತಿ ಮಾಡಲು ಅನುಮತಿ ನೀಡಲು ಕ್ರಮವಹಿಸಲಾಗುವುದು.

ಸುತ್ತೋಲೆ ಸಂಖ್ಯೆ:ಇಡಿ 253 ಎಸ್‌ಒಹೆಚ್ 87, ದಿನಾಂಕ: 22.12.1987ರಲ್ಲಿ ಅನುದಾನಿತ ಶಾಲೆಗಳಲ್ಲಿ ದಿನಾಂಕ;04.11.1986ರ ಹಿಂದಾಗಲೀ ಅಥವಾ ನಂತರವಾಗಲಿ ಬೋಧಕೇತರ ಹುದ್ದೆಗಳು ಖಾಲಿಯಾದಲ್ಲಿ ದಿನಾಂಕ: 04.11.1986ರ ನಂತರ ತುಂಬಲು ಅವಕಾಶವಿಲ್ಲ ಎಂದು ಆದೇಶಿಸಲಾಗಿರುತ್ತದೆ. ಅದರಂತೆ ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ತುಂಬಲು ಅವಕಾಶ ಇರುವುದಿಲ್ಲ.

**ಅನುದಾನಿತ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ:**

ಸರ್ಕಾರದ ಆದೇಶ ಸಂಖ್ಯೆ: ಇಡಿ 159 ಟಿಪಿಯು 2012 ದಿನಾಂಕ: 16-05-2013, ಇಡಿ 144 ಟಿಪಿಯು 2016 ದಿನಾಂಕ 09-02-2017, 12-06-2017, 12-09-2017, 23-07-2021 ಮತ್ತು 02-08-2021, ಇಪಿ 39 ಟಿಪಿಯು 2022 ದಿನಾಂಕ: 22-08-2022, ಇಪಿ 03 ಟಿಪಿಯು 2023 ದಿನಾಂಕ: 01-07-2023 & 25-06-2024 ಮತ್ತು ಇಪಿ 03 ಟಿಪಿಯು 2023 ದಿನಾಂಕ:19-02-2025ರ ವಿವಿಧ ಆದೇಶಗಳಲ್ಲಿ ದಿನಾಂಕ 31-12-2015 ರವರೆಗೆ ವಿವಿಧ ಕಾರಣಗಳಿಂದ ತೆರವಾದ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ನಿಗದಿತ ಕಾರ್ಯಭಾರವಿರುವ ಬೋಧಕ ಹುದ್ದೆಗಳಿಗೆ ಆರ್ಥಿಕ ಮಿತವ್ಯಯವನ್ನು ಸಡಿಲಿಸಿ ಒಟ್ಟು 1033 ಬೋಧಕ ಹುದ್ದೆಗಳನ್ನು ತುಂಬಲು ಅವಕಾಶ ಕಲ್ಪಿಸಿದೆ.

ಅದರಂತೆ ಇಲಾಖೆಯು ಆಡಳಿತ ಮಂಡಳಿಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಸರ್ಕಾರ/ಇಲಾಖೆ ನಿಗದಿಪಡಿಸಿರುವ ಮಾನದಂಡಗಳಾದ ನಿಗದಿತ ಕಾರ್ಯಭಾರ,

<table>
<tr><td></td><td></td><td>ದಾಖಲಾತಿ, ಫಲಿತಾಂಶ, ಆಡಳಿತ ಮಂಡಳಿ ವ್ಯಾಜ್ಯ ಹೊಂದಿರದ ಹಾಗೂ ಇತರೆ ಮಾನದಂಡಗಳನ್ನು ಪೂರೈಸುವ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಅನುಮತಿ ನೀಡಲಾಗುತ್ತಿದೆ. ಅಂತೆಯೇ, ದಿನಾಂಕ: 31-12-2015ರ ಪೂರ್ವದಲ್ಲಿ ತೆರವಾಗಿರುವ ಹುದ್ದೆಗಳಲ್ಲಿ ಸರ್ಕಾರದಿಂದ ಭರ್ತಿ ಮಾಡಲು 1033 ಬೋಧಕ ಹುದ್ದೆಗಳಿಗೆ ಅವಕಾಶ ಕಲ್ಪಿಸಿದ್ದು, ಈ ಪೈಕಿ ಒಟ್ಟು 468 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಪಿ 396 ಎಸ್ ಇ ಎಸ್ 2021 ದಿನಾಂಕ:07-08-2024ರ ಆದೇಶದಲ್ಲಿ ದಿನಾಂಕ:01-01-2016 ರಿಂದ 31-12-2020ರವರೆಗೆ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜಿನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಆನ್-ಲೈನ್ ಮೂಲಕವೇ ನಡೆಸುವಂತೆ ಆದೇಶಿಸಲಾಗಿದೆ. ಖಾಲಿ ಹುದ್ದೆಗಳ ಮಾಹಿತಿ ಇಂದೀಕರಿಸಲು ಕಾಲಾವಕಾಶವನ್ನು ಕಾಲೇಜುಗಳಿಗೆ ನೀಡಲಾಗಿದೆ. ಹುದ್ದೆಗಳ ಭರ್ತಿಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಬೇಕಾಗಿದ್ದು, ಸದರಿ ಅರ್ಜಿಯನ್ನೂ ಸಹ ತಂತ್ರಾಂಶದಲ್ಲಿ ಇಂದೀಕರಿಸಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ.</td></tr>
<tr><td>ಊ</td><td>ರಾಜ್ಯದಲ್ಲಿರುವ ಒಟ್ಟು ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲೆಗಳು ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)</td><td>ರಾಜ್ಯದಲ್ಲಿರುವ ಒಟ್ಟು ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಕನ್ನಡ ಮಾಧ್ಯಮ ಶಾಲೆಗಳ ವಿವರ ಕೆಳಕಂಡಂತಿದೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-4ರಲ್ಲಿ ಒದಗಿಸಿದೆ.
<table>
<tr><th>ಶಾಲೆ ವಿವರ</th><th>ಪ್ರಾಥಮಿಕ</th><th>ಪ್ರೌಢ</th><th>ಒಟ್ಟು</th></tr>
<tr><td>ಸರ್ಕಾರಿ</td><td>36773</td><td>4698</td><td>41471</td></tr>
<tr><td>ಅನುದಾನಿತ</td><td>2278</td><td>3418</td><td>5696</td></tr>
<tr><td>ಅನುದಾನ ರಹಿತ</td><td>3781</td><td>2292</td><td>6073</td></tr>
<tr><td>ಒಟ್ಟು</td><td>42832</td><td>10408</td><td>53240</td></tr>
</table></td></tr>
</table>

**ಸಂಖ್ಯೆ: ಇಪಿ 377 ಪಿಜಿಸಿ 2025**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು